# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

## ಸಿ.ಸಿ.1915/2019

ಸಾಕ್ಷಿದಾರರ ಹೇಳಿಕೆಃ

| | | | |
|---|---|---|---|
| **ಹೆಸರು** | : | ದೇವರಾಜ್ | ಚಾಸಾಃ 24 ಪ್ರಾಸಾಃ 8 |
| **ತಂದೆಯ ಹೆಸರು** | : | ಯಲ್ಲಪ್ಪ | |
| **ವಯಸ್ಸು** | : | 43 ವರ್ಷ | |
| **ವೃತ್ತಿ** | : | ಸಿ. ಪಿ. ಐ | |
| **ವಾಸಸ್ಥಳ** | : | ಶಿವಮೊಗ್ಗ | |

ದಿನಾಂಕಃ 04-12-2025 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದ:-

ನಾನು ದಿಃ 11-10-2019 ರಿಂದ ದಿಃ 30-09-2022 ರವರೆಗೆ ಹೊನ್ನಾಳಿ ವೃತ್ತದ ವೃತ್ತ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸಿದ್ದೇನು.

ದಿಃ 12-10-2019 ರಂದು ಈ ಪ್ರಕರಣದ ಕಡತವನ್ನು ಚಾಸಾ-23 ರವರಿಂದ ಪಡೆದುಕೊಂಡು ಅಲ್ಲಿಯವರೆಗೂ ಆದ ತನಿಖೆಯನ್ನು ಪರಿಶೀಲಿಸಿ ತನಿಖೆಯನ್ನು ಮುಂದುವರೆಸಿ, ಚಾಸಾ-1, 11 ರಿಂದ 16 ರವರ ಮರುಹೇಳಿಕೆಯನ್ನು ಮತ್ತು ಚಾಸಾ-16 ರವರಿಂದ ಮುಚ್ಚಳಿಕೆ ಪತ್ರವನ್ನು ಪಡೆದುಕೊಂಡಿರುತ್ತೇನೆ. ಚಾಸಾ-21 ರವರಿಂದ 65 ಬಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರುತ್ತೇನೆ.

ದಿಃ 19-10-2019 ರಂದು ಚಾಸಾ-18 ರವರಿಂದ ಮೃತನ ಪಿ ಎಂ ವರದಿಯನ್ನು

ಪಡೆದುಕೊಂಡಿರುತ್ತೇನೆ. ನಂತರ ತನಿಖೆಯಿಂದ ಆರೋಪಿಯ ವಿರುದ್ಧ ಆರೋಪ ಸಾಭೀತಾಗಿದ್ದರಿಂದ, ದೋಷರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

ಪಿ ಎಂ ವರದಿಯನ್ನು ಈಗಾಗಲೇ ನಿಪಿ-16 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-16(ಎ) ಎಂದು, ಚಾಸಾ-13 ರವರ ಮರುಹೇಳಿಕೆಯನ್ನು ಈಗಾಗಲೇ ನಿಪಿ-24 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-24(ಎ) ಎಂದು, ಚಾಸಾ-14 ರವರ ಮರುಹೇಳಿಕೆಯನ್ನು ಈಗಾಗಲೇ ನಿಪಿ-27 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-27(ಎ) ಎಂದು, ಚಾಸಾ-11 ರವರ ಮರುಹೇಳಿಕೆಯನ್ನು ಈಗಾಗಲೇ ನಿಪಿ-29 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-29(ಎ) ಎಂದು, ಚಾಸಾ-16 ರವರು ಬರೆದುಕೊಟ್ಟ ಮುಚ್ಚಳಿಕೆ ಪತ್ರವನ್ನು ನಿಪಿ-35 ಎಂದು, ಸಾಕ್ಷಿಯ ಸಹಿಯನ್ನು ನಿಪಿ-35(ಎ) ಎಂದು, 65 ಬಿ ಪ್ರಮಾಣ ಪತ್ರವನ್ನು ನಿಪಿ-36 ಎಂದು, ಸಾಕ್ಷಿಯ ಸಹಿಯನ್ನು ನಿಪಿ-36(ಎ) ಎಂದು ಗುರುತಿಸಲಾಯಿತು.

<u>ಪಾಟೀ ಸವಾಲು:- ಆರೋಪಿ ಪರ ವಕೀಲರರಿಂದ:-</u>

ಸಾಕ್ಷಿದಾರರ ಮರುಹೇಳಿಕೆಗಳನ್ನು ಮತ್ತು ಚಾಸಾ-16 ರವರಿಂದ ಮುಚ್ಚಳಿಕೆ ಪತ್ರವನ್ನು ಪಡೆದುಕೊಂಡಿಲ್ಲ ಮತ್ತು ಚಾಸಾ-21 ರವರಿಂದ 65 ಬಿ ಪ್ರಮಾಣ ಪತ್ರವನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಚಾಸಾ-18 ರವರಿಂದ ಮೃತನ ಪಿ ಎಂ ವರದಿಯನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲದಿದ್ದರೂ ಸಹ ಸುಳ್ಳು ತನಿಖೆಯನ್ನು ನಡೆಸಿ, ಸುಳ್ಳು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.
ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.